**All India Radio: Bangalore**
**Regional Bulletin In Kannada**
**03.04.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**03.04.2026 / 2.30 p.m.**

**<><><><>**

ಮುಖ್ಯಾಂಶಗಳು

1. ಖಾಸಗಿ ಆಸ್ಪತ್ರೆಗಳು ಅಪ್ರಾಪ್ತ ವಯಸ್ಕ ಗರ್ಭಿಣಿಯರ ಪ್ರಕರಣಗಳನ್ನು ವರದಿ ಮಾಡುವಂತೆ ಆರೋಗ್ಯ ಇಲಾಖೆಯಿಂದ ಮಾರ್ಗಸೂಚಿ
2. ಬಿರುಸುಗೊಂಡ ಉಪಚುನಾವಣೆ ಪ್ರಚಾರ-ಬಾಗಲಕೋಟೆ, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳಲ್ಲಿ ರಾಜಕೀಯ ಮುಖಂಡರಿಂದ ಮತಯಾಚನೆ
3. ಉಪಚುನಾವಣೆಯ ಮತದಾನದಂದು ಮತದಾರರಿಗೆ ವೇತನ ಸಹಿತ ರಜೆ ನೀಡುವಂತೆ ರಾಜ್ಯ ಸರ್ಕಾರಕ್ಕೆ ಚುನಾವಣಾ ಆಯೋಗ ನಿರ್ದೇಶನ
4. ಸ್ವಯಂ ಗಣತಿ ಮೂಲಕ ೨೦೨೭ರ ಜನಗಣತಿಯಲ್ಲಿ ಭಾಗವಹಿಸುವಂತೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಕರೆ
5. ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಆಟೋ ಎಲ್‌ಪಿಜಿ ಪೂರೈಕೆ ಹೆಚ್ಚಿಸಿದ ಐಓಸಿಎಲ್

<><><><>

ರಾಜ್ಯ ಸರ್ಕಾರ ಇಂದು ಆರೋಗ್ಯ ಇಲಾಖೆಯ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಖಾಸಗಿ ಆಸ್ಪತ್ರೆಗಳು ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ ಕಾಯ್ದೆಯಡಿಯಲ್ಲಿ ಅಪ್ರಾಪ್ತ ವಯಸ್ಕ ಗರ್ಭಿಣಿಯರ ಪ್ರಕರಣಗಳನ್ನು ವರದಿ ಮಾಡುವುದನ್ನು ಕಡ್ಡಾಯಗೊಳಿಸಿದೆ. ಯಾವುದೇ ಬಾಲಗರ್ಭಿಣಿ ಪ್ರಕರಣ ಖಾಸಗಿ ಆಸ್ಪತ್ರೆಯಲ್ಲಿ ದಾಖಲಾದರೆ ಸಂಬಂಧಿಸಿದ ವೈದ್ಯರು ತಕ್ಷಣವೇ ಪೊಲೀಸ್ ಠಾಣೆಗೆ ಮಾಹಿತಿ ನೀಡುವುದು ಕಡ್ಡಾಯವಾಗಿದೆ. ವರದಿ ಮಾಡಲು ವಿಫಲವಾದ ವೈದ್ಯರು ಮತ್ತು ಖಾಸಗಿ ಆಸ್ಪತ್ರೆಗಳ ವಿರುದ್ಧ ಕಾನೂನಾತ್ಮಕ ಕ್ರಮಕೈಗೊಳ್ಳುವುದಾಗಿ ಸರ್ಕಾರ ಎಚ್ಚರಿಕೆ ನೀಡಿದೆ. ಆಸ್ಪತ್ರೆಗಳು ಪೋಕ್ಸೊ ಪ್ರಕರಣದ ವಿವರಗಳನ್ನು ಸೂಕ್ತವಾಗಿ ದಾಖಲಿಸಬೇಕು. ವೈದ್ಯಕೀಯ ದಾಖಲೆಗಳನ್ನು ಕಾನುನು ಬದ್ಧವಾಗಿ ಸಂಗ್ರಹಿಸಬೇಕು. ರೋಗಿಯ ಗೌಪ್ಯತೆಯನ್ನು

ಕಾಪಾಡಬೇಕು. ತನಿಖಾಧಿಕಾರಿಗಳಿಗೆ ಅಗತ್ಯ ಸಹಕಾರ ನೀಡಬೇಕು ಎಂದು ಸರ್ಕಾರ ಮಾರ್ಗಸೂಚಿಯಲ್ಲಿ ತಿಳಿಸಿದೆ.

<><><>

ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳಲ್ಲಿ ಉಪಚುನಾವಣೆ ಪ್ರಚಾರ ಬಿರುಸುಗೊಂಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಬಾಗಲಕೋಟೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರ ಪ್ರಚಾರ ನಡೆಸುತ್ತಿದ್ದಾರೆ. ಇನ್ನೊಂದೆಡೆ ದಾವಣಗೆರೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಪರ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತಯಾಚಿಸುತ್ತಿದ್ದಾರೆ. ದಾವಣಗೆರೆಯಲ್ಲಿ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ಟಿ. ದಾಸ ಕರಿಯಪ್ಪ ಅವರ ಪರವಾಗಿ ಬುಳ್ಳಾಪುರ, ಹೊಸನಾಯಕಹಳ್ಳಿ ಹಾಗೂ ಹದಡಿ ಗ್ರಾಮಗಳಲ್ಲಿ ಪ್ರತಿಪಕ್ಷ ನಾಯಕ ಆರ್.ಅಶೋಕ ಮತಯಾಚಿಸಿದರು. ಬಿಜೆಪಿ ಅಭ್ಯರ್ಥಿಯನ್ನು ಗೆಲ್ಲಿಸುವಂತೆ ಅವರು ಮನವಿ ಮಾಡಿದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ಉಪಚುನಾವಣೆ ನಡೆಯುವ ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿ ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಬಾಗಲಕೋಟೆಯಲ್ಲಿ ಮಾತನಾಡಿದ ಕೇಂದ್ರ ಸಚಿವ ವಿ.ಸೋಮಣ್ಣ, ರಾಜ್ಯ ಸರ್ಕಾರದ ಭ್ರಷ್ಟಾಚಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇನ್ನೊಂದೆಡೆ ಸಂಸದ ರಮೇಶ್ ಜಿಗಜಿಣಗಿ ಮಾತನಾಡಿ, ಬಾಗಲಕೋಟೆಯಲ್ಲಿ ಈ ಹಿಂದೆ ಶಾಸಕರಾಗಿದ್ದ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿದ್ದು, ಅವರನ್ನು ಗೆಲ್ಲಿಸುವಂತೆ ಮನವಿ ಮಾಡಿದ್ದಾರೆ.

<><><>

ಉಪಚುನಾವಣೆಯ ಮತದಾನ ನಡೆಯುವ ಇದೇ ೯ ರಂದು ವೇತನ ಸಹಿತ ರಜೆ ನೀಡಬೇಕೆಂದು ಚುನಾವಣಾ ಆಯೋಗ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ. ರಾಜ್ಯದಲ್ಲಿ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಉಪಚುನಾವಣೆ ನಡೆಯಲಿದ್ದು, ಅಲ್ಲಿನ ಮತದಾರರಿಗೆ ವೇತನ ಸಹಿತ ರಜೆ ಅನ್ವಯವಾಗಲಿದೆ. ಚುನಾವಣಾ ಆಯೋಗದ ನಿಬಂಧನೆಗಳನ್ನು ಉಲ್ಲಂಘಿಸುವ ಉದ್ಯೋಗದಾತರಿಗೆ ದಂಡ ವಿಧಿಸಲಾಗುವುದು ಎಂದು ಆಯೋಗ ತಿಳಿಸಿದೆ. ತಮ್ಮ ಕ್ಷೇತ್ರದ ಹೊರಗೆ ಇರುವ ಕೈಗಾರಿಕೆ ಅಥವಾ ವಾಣಿಜ್ಯ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಮತದಾರರು ವೇತನ ಸಹಿತ ರಜೆಯ ಪ್ರಯೋಜನ ಪಡೆಯಲು ಅರ್ಹರಾಗಿದ್ದಾರೆ.

<><><>

ದೇಶದ ಭವಿಷ್ಯದ ಯೋಜನೆಗಳು ಮತ್ತು ಅಭಿವೃದ್ಧಿಯ ದಿಕ್ಸೂಚಿಯೇ ನೈಜ ಅಂಕಿ-ಅಂಶಗಳನ್ನು ನೀಡುವ ಜನಗಣತಿ. ೨೦೨೭ರ ಜನಗಣತಿ ಪ್ರಕ್ರಿಯೆ ಆರಂಭವಾಗಿದ್ದು, ಈ ಬಾರಿ 'ಸ್ವಯಂ-ಗಣತಿ' ಮಾಡುವ ಅದ್ಭುತ ಅವಕಾಶ ಸಿಕ್ಕಿದೆ. ಎಲ್ಲ ನಾಗರಿಕರು ಸ್ವಯಂ ಗಣತಿಯಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಕರೆ ನೀಡಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಕುಟುಂಬದ ವಿವರಗಳನ್ನು ಸರಳವಾಗಿ ಭರ್ತಿ ಮಾಡಿ. ದಾಖಲಿಸಿದ ನಂತರ ಬರುವ ಎಸ್‌ಇ ಐಡಿ ಅನ್ನು ಜೋಪಾನವಾಗಿ ಇಟ್ಟುಕೊಳ್ಳಿ. ನಂತರ ಗಣತಿದಾರರು ಮನೆಗೆ ಬಂದಾಗ, ನೀವು ಈ ಎಸ್‌ಇ ಐಡಿ ನೀಡುವ ಮೂಲಕ ಸುಭದ್ರ ಭಾರತದ ನಿರ್ಮಾಣಕ್ಕೆ ಕೈಜೋಡಿಸಿ ಎಂದು ತಿಳಿಸಿದ್ದಾರೆ.

**ಧ್ವನಿ: ಪ್ರಲ್ಹಾದ್ ಜೋಶಿ**

<><><>

ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್-ಐಓಸಿಎಲ್ ರಾಜ್ಯಾದ್ಯಂತ ಆಟೋ ಎಲ್ಪಿಜಿ ಪೂರೈಕೆಯನ್ನು ಹೆಚ್ಚಿಸಿದೆ. ಬೆಂಗಳೂರು ಮತ್ತು ರಾಜ್ಯದ ಇತರ ಭಾಗಗಳಲ್ಲಿನ ಹಲವಾರು ಖಾಸಗಿ ಆಟೋ ಎಲ್ಪಿಜಿ ಕೇಂದ್ರಗಳನ್ನು ಮುಚ್ಚಿದ ಹಾಗೂ ಭಾಗಶಃ ಸ್ಥಗಿತಗೊಳಿಸಿದ ನಂತರ ಪೂರೈಕೆ ಸರಪಳಿಯನ್ನು ಹೆಚ್ಚಿಸಿದೆ. ಇಂಡಿಯನ್ ಆಯಿಲ್ ಪ್ರಸ್ತುತ ರಾಜ್ಯದಲ್ಲಿ ೫೫ ಆಟೋ ಎಲ್ಪಿಜಿ ವಿತರಣಾ ಕೇಂದ್ರಗಳ ಮೂಲಕ ಆಟೋ ರಿಕ್ಷಾಗಳು ಮತ್ತು ಎಲ್ಪಿಜಿ ಚಾಲಿತ ಕಾರುಗಳ ಇಂಧನ ಅಗತ್ಯಗಳನ್ನು ಪೂರೈಸುತ್ತಿದೆ. ರಾಜ್ಯದಲ್ಲಿ ಇಂಡಿಯನ್ ಆಯಿಲ್‌ನ ಎಎಲ್‌ಡಿಎಸ್ ಸರಾಸರಿ ದೈನಂದಿನ ಮಾರಾಟವು ಹಿಂದಿನ ಮೂರು ತಿಂಗಳ ಸರಾಸರಿ ೪೩.೪ ಮೆಟ್ರಿಕ್ ಟನ್‌ಗೆ ಹೋಲಿಸಿದರೆ ೫೯.೫೩ ಮೆಟ್ರಿಕ್ ಟನ್‌ಗೆ ಏರಿಕೆಯಾಗಿದೆ. ಇದು ಗ್ರಾಹಕರ ಬೇಡಿಕೆಯಲ್ಲಿ ಗಮನಾರ್ಹ ಹೆಚ್ಚಳವನ್ನು ಸೂಚಿಸಿದೆ.

<><><>

ರಾಜ್ಯಾದ್ಯಂತ ಇಂದು ಗುಡ್ ಫ್ರೈಡೆ ಹಿನ್ನೆಲೆಯಲ್ಲಿ ಚರ್ಚ್‌ಗಳಲ್ಲಿ ವಿಶೇಷ ಪ್ರಾರ್ಥನೆ ನಡೆಯುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ ಹಾಗೂ ನೆಲಮಂಗಲದ ಚರ್ಚ್ ಗಳಲ್ಲಿ ವಿಶೇಷ ಪ್ರಾರ್ಥನೆ ನಡೆಯಿತು. ಯೇಸುಕ್ರಿಸ್ತನನ್ನು ಶಿಲುಬೆಗೇರಿಸಿದ ದಿನವಾದ ಇಂದು ಕ್ರಿಸ್ತನ ತ್ಯಾಗವನ್ನು ಸ್ಮರಿಸುವ ಹಿನ್ನೆಲೆಯಲ್ಲಿ ಶುಭ ಶುಕ್ರವಾರ ದಿನವನ್ನಾಗಿ ಕ್ರೈಸ್ತ ಬಾಂಧವರು ಶ್ರದ್ಧಾ ಭಕ್ತಿಗಳಿಂದ ಆಚರಿಸಿದರು. ಕೋಲಾರ ಜಿಲ್ಲೆಯ ಚರ್ಚ್‌ಗಳಲ್ಲಿ ಕ್ರೈಸ್ತ ಭಾಂಧವರು ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಮೆಕ್ಕೆ ಸರ್ಕಲ್ ನಲ್ಲಿರುವ ಹಾರ್ಟ್ ಆಪ್ ಮೇರಿ ಚರ್ಚ್,

ಮೆಥೋಡಿಸ್ಟ್ ಚರ್ಚ್, ಇಮ್ಯಾಕುಲೇಟ್ ಹಾರ್ಟ್ ಆಫ್ ಮೇರಿ ಚರ್ಚ್‌ಗಳಲ್ಲಿ ಯೇಸುಕ್ರಿಸ್ತನ ತ್ಯಾಗ, ಬಲಿದಾನವನ್ನು ಸ್ಮರಿಸಿದರು. ಶಿವಮೊಗ್ಗ, ದಕ್ಷಿಣಕನ್ನಡ, ಉಡುಪಿ ಹಾಗೂ ಬೆಂಗಳೂರಿನಲ್ಲಿ ಕ್ರೈಸ್ತ ಬಾಂಧವರು ಚರ್ಚ್‌ಗಳಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

<><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ನಾಳೆ ರಾಜ್ಯಕ್ಕೆ ಭೇಟಿ ನೀಡಲಿದ್ದಾರೆ. ಬೆಳಗ್ಗೆ ಬೆಂಗಳೂರಿನಲ್ಲಿ ಬಿಜೆಪಿ ಕಾರ್ಯಕರ್ತರನ್ನು ಉದ್ದೇಶಿಸಿ ಅವರು ಮಾತನಾಡಲಿದ್ದಾರೆ. ಬಳಿಕ ಬೆಂಗಳೂರು ಗ್ರಾಮೀಣ ಲೋಕಸಭಾ ಕ್ಷೇತ್ರದ ಚೆನ್ನಪಟ್ಟಣದಲ್ಲಿ ರೋಡ್ ಶೋ ನಡೆಸಲಿದ್ದಾರೆ. ಐದು ಲೋಕಸಭಾ ಕ್ಷೇತ್ರಗಳ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಅಮಿತ್ ಶಾ ಮಾತನಾಡಲಿದ್ದಾರೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ವಿ.ಸುನೀಲ್ ಕುಮಾರ್ ಮಾಹಿತಿ ನೀಡಿದ್ದಾರೆ.

<><><>

ರಾಜ್ಯದ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಉಪಚುನಾವಣೆ ಘೋಷಣೆಯಾಗಿದ್ದು, ಏಪ್ರಿಲ್ ೯ರಂದು ಮತದಾನ ನಡೆಯಲಿದೆ. ಮೇ ೪ರಂದು ಮತಎಣಿಕೆ ನಡೆಯಲಿದೆ. ಎರಡು ವಿಧಾನಸಭಾ ಕ್ಷೇತ್ರಗಳ ಸಮಗ್ರ ಚಿತ್ರಣ ಒದಗಿಸುವ ಮತಕ್ಷೇತ್ರ ದರ್ಶನದ ಮಾಹಿತಿಯನ್ನು ಬೆಂಗಳೂರು ಆಕಾಶವಾಣಿ ಪ್ರಾದೇಶಿಕ ಸುದ್ದಿ ವಿಭಾಗ ಪ್ರಸ್ತುತ ಪಡಿಸುತ್ತಿದೆ. ಈಗ ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಮತ ಕ್ಷೇತ್ರ ದರ್ಶನ

**ವರದಿ : ಪರಶುರಾಮ್ ಪೇಟಕರ್**

ಬಾಗಲಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಮತ್ತೆ ಉಪಚುನಾವಣೆಯ ರಾಜಕೀಯ ಚಟುವಟಿಕೆ ಭರದಿಂದ ಸಾಗಿವೆ. ಈ ಬಾರಿಯ ಉಪಚುನಾವಣೆಯಲ್ಲಿ ಪ್ರಮುಖ ರಾಜಕೀಯ ಪಕ್ಷಗಳಾದ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ನೇರ ಪೈಪೋಟಿ ಏರ್ಪಟ್ಟಿದೆ. ಕಾಂಗ್ರೆಸ್ ಪಕ್ಷದಿಂದ ದಿವಂಗತ ಎಚ್.ವೈ. ಮೇಟಿ ಅವರ ಪುತ್ರ ಉಮೇಶ್ ಮೇಟಿ ಸ್ಪರ್ಧಿಸುತ್ತಿದ್ದು, ಬಿಜೆಪಿ ಅಭ್ಯರ್ಥಿಯಾಗಿ ವೀರಣ್ಣ ಚರಂತಿಮಠ ಕಣಕ್ಕಿಳಿದಿದ್ದಾರೆ. ಬಾಗಲಕೋಟೆ ಮತಕ್ಷೇತ್ರದಲ್ಲಿ ಒಟ್ಟು ೩೨೨ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ೨ ಲಕ್ಷದ ೫೯ ಸಾವಿರದ ೭೯೭ ಮತದಾರರು ಮತದಾನ ಹಕ್ಕು ಹೊಂದಿದ್ದು, ಇವರಲ್ಲಿ ೧,೨೬,೯೯೯ ಪುರುಷರು, ೧,೩೨,೭೭೫ ಮಹಿಳೆಯರು ಹಾಗೂ ೨೩ ಇತರೆ ಮತದಾರರು ಸೇರಿದ್ದಾರೆ. ಯುವ ಮತದಾರರ ಸಂಖ್ಯೆ ೪ ಸಾವಿರದ೩೮೭ ಆಗಿದ್ದು, ಇವರಲ್ಲಿ ೨ಸಾವಿರದ ೨೭೮ ಮಹಿಳೆಯರು ಹಾಗೂ ೨,೧೦೯ ಪುರುಷರು ಇದ್ದಾರೆ. ೮೫ ವರ್ಷ ಮೇಲ್ಪಟ್ಟ ಹಿರಿಯ ಮತದಾರರು

೩,೦೧೭ ಇದ್ದು, ಮಹಿಳಾ ಮತದಾರರೇ ಹೆಚ್ಚು. ೧೦೦ ವರ್ಷ ದಾಟಿದ ೩೮ ಮತದಾರರಲ್ಲಿ ೨೬ ಮಹಿಳೆಯರು ಮತ್ತು ೧೨ ಪುರುಷರು ಸೇರಿದ್ದಾರೆ. ವಿಶೇಷಚೇತನ ಮತದಾರರು ೨,೬೪೩ ಇದ್ದು, ಇವರಲ್ಲಿ ೧,೫೩೬ ಪುರುಷರು ಹಾಗೂ ೧,೧೦೭ ಮಹಿಳೆಯರು ಸೇರಿದ್ದಾರೆ. ೩೮೫ ಸೇವಾ ಮತದಾರರು ಕೂಡ ಪಟ್ಟಿಯಲ್ಲಿ ಇದ್ದಾರೆ. ೮೦ ವರ್ಷ ಮೇಲ್ಪಟ್ಟ ವೃದ್ಧರು ಮತ್ತು ವಿಶೇಷಚೇತನರಿಗೆ ಮನೆಮಠದಲ್ಲಿಯೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ. ಚುನಾವಣಾ ವ್ಯವಸ್ಥೆಯನ್ನು ಸಮರ್ಥವಾಗಿ ನಡೆಸಲು ೨೯ ಸೆಕ್ಟರ್ ಅಧಿಕಾರಿಗಳು, ೬೦ ಫ್ಲೈಯಿಂಗ್ ಸ್ಕ್ವಾಡ್ ಗಳು, ೨೪ ಚೆಕ್ ಪೋಸ್ಟ್ ಗಳು  ೭೨ ಸ್ಥಿರ ನಿಗಾವಳಿ ತಂಡಗಳು ಹಾಗೂ ೨೨ ವಿಡಿಯೋ ನಿಗಾವಳಿ ತಂಡಗಳನ್ನು ನಿಯೋಜಿಸಲಾಗಿದೆ. ನಾಮಪತ್ರ ಸಲ್ಲಿಸಿದ ೧೪ ಅಭ್ಯರ್ಥಿಗಳ ಪೈಕಿ ೫ ಮಂದಿ ಹಿಂಪಡೆಯುವುದರಿಂದ, ಒಟ್ಟು ೯ ಅಭ್ಯರ್ಥಿಗಳು ಅಂತಿಮ ಕಣದಲ್ಲಿ ಉಳಿದಿದ್ದಾರೆ. ಇವರಲ್ಲಿ ಕಾಂಗ್ರೆಸ್ ನ ಉಮೇಶ್ ಹುಲ್ಲಪ್ಪ ಮೇಟಿ, ಬಿಜೆಪಿ ಅಭ್ಯರ್ಥಿ ಚರಂತಿಮಠ ವೀರಭದ್ರಯ್ಯ ಪ್ರಮುಖ ಸ್ಪರ್ಧಿಗಳಾಗಿದ್ದಾರೆ. ಬಾಗಲಕೋಟೆ ಉಪಚುನಾವಣೆ ರಾಜಕೀಯವಾಗಿ ಮಹತ್ವದ ಸಮರವಾಗಿ ಪರಿಣಮಿಸಿದೆ. ಯುವ ಹಾಗೂ ಮಹಿಳಾ ಮತದಾರರನ್ನು ಸೆಳೆಯಲು ಆಯೋಗ ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>